## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸೌಹಾರ್ದ ಸಹಕಾರಿಗಳ ಚುನಾವಣೆಯನ್ನು ಡಿಸೆಂಬರ್ 2020ರ ವರೆಗೆ ಮುಂದೂಡುವ ಬಗ್ಗೆ ಹಾಗೂ ಆಡಳಿತ ಮಂಡಳಿಗಳ ಅವಧಿ ಮುಕ್ತಾಯಗೊಂಡಿರುವ/ ಮುಕ್ತಾಯಗೊಳ್ಳಲಿರುವ ಸೌಹಾರ್ದ ಸಹಕಾರಿಗಳಿಗೆ ವಿಶೇಷಾಧಿಕಾರಿಗಳನ್ನು ನೇಮಿಸುವ ಬಗ್ಗೆ.

**ಓದಲಾಗಿದೆ:** ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ: ಆರ್‌ಸಿಎಸ್/ಆರ್‌ಎಸ್‌ಆರ್/ಎಕ್ಸ್‌ಎಂಸಿ/279/2019-20, ದಿನಾಂಕ:13.07.2020.

****

**ಪ್ರಸ್ತಾವನೆ:**

ಮೇಲೆ ಓದಲಾದ (2)ರ ನಿಬಂಧಕರ ಪ್ರಸ್ತಾವನೆಯಲ್ಲಿ ರಾಜ್ಯದಲ್ಲಿ ಕೊರೋನಾ ವೈರಸ್ (ಕೋವಿಡ್-19) ಸಾಂಕ್ರಾಮಿಕ ರೋಗವು ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ, ಎಲ್ಲಾ ಸಹಕಾರ ಸಂಘಗಳು/ಸಹಕಾರ ಬ್ಯಾಂಕುಗಳ (ಪ್ರಾಥಮಿಕ, ಮಾಧ್ಯಮಿಕ/ಒಕ್ಕೂಟಗಳ (ಫೆಡರಲ್ ಸಂಸ್ಥೆ) ಮತ್ತು ಅಪೆಕ್ಸ್ ಸಹಕಾರ ಸಂಘಗಳ ಹಾಗೂ ಸೌಹಾರ್ದ ಸಹಕಾರಿಗಳ) ಚುನಾವಣೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಡಿಸೆಂಬರ್ 2020ರ ಅಂತ್ಯದವರೆಗೆ ಮುಂದೂಡಲು ಹಾಗೂ ಈಗಾಗಲೇ ಚುನಾವಣಾ ವೇಳಾ ಪಟ್ಟಿ (Calender of events) ಹೊರಡಿಸಿ ಚುನಾವಣೆ ಪ್ರಕ್ರಿಯೆ ಬಾಕಿ ಇದ್ದಲ್ಲಿ ಅದನ್ನು ತಕ್ಷಣದಿಂದ ರದ್ದುಪಡಿಸುವುದು ಮತ್ತು ಈಗಾಗಲೇ ಆಡಳಿತ ಮಂಡಳಿ ಅವಧಿ ಮುಕ್ತಾಯಗೊಂಡಿರುವ/ಮುಕ್ತಾಯಗೊಳ್ಳಲಿರುವ ಸಹಕಾರ ಸಂಸ್ಥೆಗಳ/ ಸೌಹಾರ್ದ ಸಹಕಾರಿಗಳಿಗೆ ಆಡಳಿತಾಧಿಕಾರಿ/ವಿಶೇಷಾಧಿಕಾರಿಗಳನ್ನು ನೇಮಿಸಲು ಸಂಬಂಧಪಟ್ಟ ಸಕ್ಷಮ ನಿಬಂಧಕರುಗಳು (Jurisdictional Registrars) ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ, 1959ರ ಕಲಂ 28(ಎ)(5) ರೀತ್ಯಾ ಆಡಳಿತಾಧಿಕಾರಿ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ, 1997ರ ಕಲಂ 38(ಎ)(1) ರೀತ್ಯಾ ಕರ್ನಾಟಕ ಸೌಹಾರ್ದ ಸಂಯುಕ್ತ ಸಹಕಾರಿಯು ವಿಶೇಷಾಧಿಕಾರಿ ನೇಮಕಾತಿಗೆ ಕ್ರಮವಿಡಲು ಸೂಕ್ತ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಒ 32 ಸಿಎಲ್‌ಎಂ 2020, ಬೆಂಗಳೂರು, ದಿನಾಂಕ: 14.07.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸೌಹಾರ್ದ ಸಹಕಾರಿಗಳ ಚುನಾವಣೆಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಕೇಂದ್ರ ಕಛೇರಿ, ಗಾಂಧಿನಗರ, ಬೆಂಗಳೂರು-18
30 JUL 2020
1382

1. ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1977ರ ಪ್ರಕರಣ 70ರ ಅವಕಾಶದಂತೆ ಸರ್ಕಾರಕ್ಕೆ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಪ್ರಕರಣ 26ಕ್ಕೆ ವಿನಾಯಿತಿ ನೀಡಿ ಎಲ್ಲಾ ಸೌಹಾರ್ದ ಸಹಕಾರಿಗಳ ಚುನಾವಣೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಡಿಸೆಂಬರ್ 2020ರ ಅಂತ್ಯದವರೆವಿಗೆ ಮುಂದೂಡಲಾಗಿದೆ.
2. ಈಗಾಗಲೇ ಸೌಹಾರ್ದ ಸಹಕಾರಿಗಳ ಚುನಾವಣಾ ವೇಳಾ ಪಟ್ಟಿ (Calender of events) ಹೊರಡಿಸಿ, ಚುನಾವಣೆ ಪ್ರಕ್ರಿಯೆ ಜಾರಿಯಲ್ಲಿದ್ದಲ್ಲಿ ಅದನ್ನು ಸಹ ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿದೆ.
3. ಆಡಳಿತ ಮಂಡಳಿ ಅವಧಿ ಮುಕ್ತಾಯಗೊಂಡಿರುವ/ಮುಕ್ತಾಯಗೊಳ್ಳಲಿರುವ ಸೌಹಾರ್ದ ಸಹಕಾರಿಗಳಿಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರವಾದ ಕರ್ನಾಟಕ ಸೌಹಾರ್ದ ಸಂಯುಕ್ತ ಸಹಕಾರಿಯು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ, 1997ರ ಕಲಂ 38(ಎ)(1) ರೀತ್ಯಾ ವಿಶೇಷಾಧಿಕಾರಿಯ ನೇಮಕಾತಿಗೆ ಕ್ರಮವಿಡಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ಎಂ. ಆಶಾ)
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ.

**ಇವರಿಗೆ :**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯಪತ್ರದಲ್ಲಿ ಕೂಡಲೇ ಪ್ರಕಟಿಸಿ, ಅದರ 25 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಗಳು :**

1. ಪ್ರಧಾನ ಮಹಾಲೇಖಪಾಲರು, (ಜಿ&ಎಸ್ಎಸ್ಎ)/(ಇ&ಆರ್ಎಸ್ಎ)/(ಎ&ಇ), ಕರ್ನಾಟಕ ರಾಜ್ಯ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ, ಬೆಂಗಳೂರು.
6. ಸಹಕಾರ ಸಂಘಗಳ ನಿಬಂಧಕರು, ನಂ.1, ಅಲಿ ಆಸ್ಕರ್ ರಸ್ತೆ, ಬೆಂಗಳೂರು-560 052.
7. ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಕೆ.ಹೆಚ್. ರಸ್ತೆ, ಬೆಂಗಳೂರು.
8. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ, ರಾಜಾಜಿನಗರ, ಬೆಂಗಳೂರು
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.